# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ದಿನಾಂಕ :– 06/04/2021 ರಂದು ನೋಡಲ್ ಅಧಿಕಾರಿಗಳ ಅಧ್ಯಕ್ಷತೆಯಲ್ಲಿ ನಡೆದ ವಾರ್ಡ್ 60ರ ವಾರ್ಡ್ ಸಮಿತಿ ಸಭೆಯ ನಡುವಳಿ

**ಸಭೆಗೆ ಹಾಜರಿದ್ದ ಅಧಿಕಾರಿಗಳು :**

1. ಶ್ರೀಮತಿ. ಸ್ಮಿತ ನೋಡಲ್ ಅಧಿಕಾರಿಗಳು
2. ಶ್ರೀ. ಬಸವರಾಜು, ವಾರ್ಡ್ ಇಂಜಿನೀಯರ್
3. ಶ್ರೀ. ರಾಘವೇಂದ್ರ ಪುಲಿಕೇಶಿನಗರ ಅಸಿಸ್ಟಂಟ್ ಸಭ್–ಇನ್ಸ್‌ಪೆಕ್ಟರ್
4. ಶ್ರೀ. ಶೇಕರ್.ವಿ ಕಂದಾಯ ಪರೀವಿಕ್ಷಕರು.
5. ಶ್ರೀ. ನಾಗಭೂಷನ್, ಕಿರಿಯ ಆರೋಗ್ಯ ಪರೀವಿಕ್ಷಕರು

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ನೋಡಲ್ ಅಧಿಕಾರಿರವರು ಎಲ್ಲಾ ಅಧಿಕಾರಿಗಳನ್ನು ಸ್ವಾಗತಿಸಿದರು. ವಾರ್ಡ್–60 ರ ವಾರ್ಡ್ ಸಮಿತಿ ಸಭೆಯನ್ನು ವಾರ್ಡ್ ಕಛೇರಿಯಲ್ಲಿ ನಡೆಸಲಾಯಿತು.

➢ **ಆರೋಗ್ಯ ಇಲಾಖೆಗೆ ಸಂಬಂದಿಸಿರುವುದು**

1. ವಾರ್ಡ್ ವ್ಯಾಪ್ತಿಯ ರಿಚ್ಚರ್ಡ್ ಪಾರ್ಕ್‌ನ ಸುತ್ತಮುತ್ತ ಸಾಯಂಕಾಲ ಹಾಗೂ ಶನಿ, ಭಾನುವಾರದಂದು ಜನಸಾಂದ್ರತೆ ಹೆಚ್ಚಾಗಿ ಇದ್ದು ಕಸವನ್ನು ಟ್ರೀಗಾಡ್‌ನಲ್ಲಿ ತುಂಬುತ್ತಿದ್ದು ಕೂಡಲೆ ವಹಿಸಲು ಸೂಚಿಸಿದರು.
2. ವಾರ್ಡ್ ವ್ಯಾಪ್ತಿಯ ಮುಖ್ಯ ರಸ್ತೆಗಳಲ್ಲಿ ಕಸ ನಿರ್ವಹಣೆ ಸರಿಯಾಗಿ ಆಗುತ್ತಿಲ್ಲ ಕೂಡಲೆ ಕ್ರಮ ವಹಿಸಲು ಸೂಚಿಸಿದರು.
3. ವಾರ್ಡ್ ವ್ಯಾಪ್ತಿಯ ಕನರ್ಸವ್ನೇನ್ಸಿ ಲೇನ್‌ಗಳನ್ನು ಸ್ವಚ್ಛಗೊಳಿಸಲು ಸೂಚಿಸಿದರು.

**ಕ್ರಮ : ಕಿರಿಯ ಆರೋಗ್ಯ ಪರೀವಿಕ್ಷಕರು ಈ ಮೇಲೆ ಸೂಚಿಸಿರುವ ಸಮಸ್ಯೆಗಳಿಗೆ ಶಿಘ್ರದಲ್ಲೆ ಪರಿಹರಿಸಲು ಈ ಸಭೆ ಮುಖಾಂತರ ಸೂಚಿಸಿದರು.**

➢ **ಪೊಲೀಸ್ ಇಲಾಖೆಗೆ (ಸಿವಿಲ್) ಸಂಬಂದಿಸಿರುವುದು**

1. ವಾರ್ಡ್ ವ್ಯಾಪ್ತಿಯಲ್ಲಿ ಗಾಂಜಾ ಹಾಗೂ ಮದ್ಯ ಕುಡಿಯುವುದು ಹಾಗೂ ನಿಲುಗಡೆ ವಾಹನಗಳಿಗೆ ಹಾನಿ ಉಂಟು ಮಾಡುವುದು,... ಇನ್ನೂ ಇತರೆ ಅಸ್ಯೆಂಗಿಕ ಕಾರ್ಯಾಚರಣೆ ನಡೆಯುತ್ತಿದ್ದು ಇವುಗಳ ಮೇಲೆ ಕೂಡಲೆ ಕ್ರಮ ಕೈಗೊಳ್ಳಲು ಸೂಚಿಸಿದರು.
2. ವಾರ್ಡ್ ವ್ಯಾಪ್ತಿಯಲ್ಲಿ ಕಳ್ಳತನ ಹೆಚ್ಚಾಗುತ್ತಿದ್ದು ಪೊಲೀಸ್ ಬೀಟ್ ಹಾಕುವುದನ್ನು ಹೆಚ್ಚಿಸಲು ಅಧಿಕಾರಿ ವರ್ಗದವರಿಗೆ ಸೂಚಿಸಿದರು.

**ಕ್ರಮ : ಈ ಮೇಲೆ ಸೂಚಿಸಿರುವ ಸಮಸ್ಯೆಗಳಿಗೆ ಶಿಘ್ರದಲ್ಲೆ ಪರಿಹರಿಸುವಂತೆ ಈ ಸಭೆ ಮುಖಾಂತರ ಸೂಚಿಸಲಾಯಿತು.**

➢ **<u>ಕಾಮಗಾರಿ ಇಲಾಖೆಗೆ ಸಂಬಂದಿಸಿರುವುದು</u>**

1. ವಾರ್ಡ್ ವ್ಯಾಪ್ತಿಯ ರಿಚ್ಚರ್ಡ್ ಪಾರ್ಕ್ ಶೌಚಾಲಯವನ್ನು ನವೀಕರಣಗೋಳಿಸಲು ಸೂಚಿಸಿದರು.
2. ವಾರ್ಡ್ ವ್ಯಾಪ್ತಿಯ ಸುಂದರ್ ಆಸ್ಪತ್ರೇ ಮುಂದಿನ ರಸ್ತೆಯನ್ನು ಹೊಸದಾಗಿ ನಿರ್ಮಿಸಲು ಸೂಚಿಸಿದರು.
3. ವಾರ್ಡ್ ವ್ಯಾಪ್ತಿಯ ಲಾಜಾರ್ ಮುಖ್ಯರಸ್ತೆ ಹಾಗೂ ರಿಚ್ಚರ್ಡ್ ಪಾರ್ಕ್ ಸುತ್ತಮುತಲ್ಲಿನ ಫೂಟ್‌ಪಾತ್‌ಗಳನ್ನು ರೀಪೇರಿ ಮಾಡಲು ಸೂಚಿಸಿದರು.

**ಕ್ರಮ : ಈ ಮೇಲೆ ಸೂಚಿಸಿರುವ ಸಮಸ್ಯೆಗಳಿಗೆ ಶಿಘ್ರದಲ್ಲೆ ಪರಿಹರಿಸುವಂತೆ ಈ ಸಭೆ ಮುಖಾಂತರ ಸೂಚಿಸಲಾಯಿತು.**

➢ **<u>ಪೊಲೀಸ್ ಇಲಾಖೆಗೆ (ಟ್ರಾಫಿಕ್) ಸಂಬಂದಿಸಿರುವುದು</u>**

1. ವಾರ್ಡ್ ವ್ಯಾಪ್ತಿಯ ಗಾಸ್ಪಾಲ್ ಸ್ಟ್ರಿಟ್‌ನಲ್ಲಿ ರಸ್ತೆ ಬದಿ ವಾಹನಗಳನ್ನು ಕೂಡಲೆ ತೇರೆವುಗೋಳಿಸಲು ಸೂಚಿಸಿದರು.
2. ವಾರ್ಡ್ ವ್ಯಾಪ್ತಿಯಲ್ಲಿ ಅನಧಿಕೃತವಾಗಿ ಪಾರ್ಕಿಂಗ್ ಮಾಡುತ್ತಿದ್ದು ಕೂಡಲೆ ಕ್ರಮ ವಹಿಸಲು ಸೂಚಿಸಿದರು.

**ಕ್ರಮ : ಪೊಲೀಸ್ ಸಭ್-ಇನ್‌ಪೇಕ್ಟರ್‌ರವರು ಲಿಖಿತ ಪೂರಕವಾಗಿ ಕಂಪ್ಲೆಂಟ್ ನೀಡಬೇಕೆಂದು ಸೂಚಿಸಿದರು.**

ಈ ಎಲ್ಲಾ ವಿಷಯಗಳ ಬಗ್ಗೆ ತುರ್ತಾಗಿ ಕ್ರಮ ಕೈಗೊಳ್ಳಲು ಸಂಬಂದಪಟ್ಟವರಿಗೆ ಸೂಚಿಸುತ್ತಾ ವಂದನೆಗಳೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಿದೆ.

ಸದಸ್ಯ ಕಾರ್ಯದರ್ಶಿ-60 ನೋಡಲ್ ಅಧಿಕಾರಿ-60

**ಪ್ರತಿಗಳನ್ನು:**

- ಮಾನ್ಯ ಆಡಳಿತಾಧಿಕಾರಿ, ಬಿ.ಬಿ.ಎಂ.ಪಿ ರವರ ಮಾಹಿತಿಗಾಗಿ ಸಲ್ಲಿಸಿದೆ.
- ಮಾನ್ಯ ವಲಯ ಆಯುಕ್ತರು ರವರ ಮಾಹಿತಿಗಾಗಿ ಸಲ್ಲಿಸಿದೆ.
- ಮಾನ್ಯ ಜಂಟಿ ಆಯುಕ್ತರು (ಪೂರ್ವ) ರವರ ಮಾಹಿತಿಗಾಗಿ ಸಲ್ಲಿಸಿದೆ
- ಮುಖ್ಯ ಅಭೀಯಂತರರು (ಪೂರ್ವ) ರವರ ಮಾಹಿತಿಗಾಗಿ ಸಲ್ಲಿಸಿದೆ.
- ಕಾರ್ಯಪಾಲಕ ಅಭಿಯಂತರರು, ಪುಲಿಕೇಶಿನಗರ ರವರ ಮಾಹಿತಿಗಾಗಿ ಸಲ್ಲಿಸಿದೆ.
- ಸಹಾಯಕ ಕಾರ್ಯಪಾಲಕ ಅಭಿಯಂತರರು, ಕೆ.ಜಿ.ಹಳ್ಳಿ ಉಪ-ವಿಭಾಗ ರವರ ಮಾಹಿತಿಗಾಗಿ ಸಲ್ಲಿಸಿದೆ.
- ಸಹಾಯಕ ಕಾರ್ಯಪಾಲಕ ಅಭಿಯಂತರರು (ಘನ ತ್ಯಾಜ್ಯ) ಪುಲಕೇಶಿನಗರ ವಿಭಾಗ ರವರ ಮಾಹಿತಿಗಾಗಿ ಸಲ್ಲಿಸಿದೆ.
- ಸಹಾಯಕ ಕಂದಾಯ ಅಧಿಕಾರಿ (ಕೆ.ಜಿ. ಹಳ್ಳಿ) ಉಪವಿಭಾಗ ರವರ ಮಾಹಿತಿಗಾಗಿ ಸಲ್ಲಿಸಿದೆ.
- ಸಹಾಯಕ ಕಾರ್ಯಪಾಲಕ ಅಭಿಯಂತರರು (ಬೆಸ್ಕಾಂ) ರವರ ಮಾಹಿತಿಗಾಗಿ ಸಲ್ಲಿಸಿದೆ.
- ಸಹಾಯಕ ಕಾರ್ಯಪಾಲಕ ಅಭಿಯಂತರರು (ಎಲೆಕ್ಟ್ರೀಕಲ್) ಬಿ.ಬಿ.ಎಂಪಿ. ಮೆಯೋಹಾಲ್ ರವರ ಮಾಹಿತಿಗಾಗಿ ಸಲ್ಲಿಸಿದೆ
- ಸಹಾಯಕ ಕಾರ್ಯಪಾಲಕ ಅಭಿಯಂತರರು (ಬಿ.ಡಬ್ಲ್ಯೂ.ಎಸ್.ಎಸ್.ಬಿ) ನೇತಾಜಿ ರಸ್ತೆ, ರವರ ಮಾಹಿತಿಗಾಗಿ ಸಲ್ಲಿಸಿದೆ.
- ಪೊಲೀಸ್ ಇನ್ಸ್‌ಪೆಕ್ಟರ್ (ಸಿವಿಲ್) ಕೆ.ಜಿ.ಹಳ್ಳಿ ರವರ ಮಾಹಿತಿಗಾಗಿ ಸಲ್ಲಿಸಿದೆ.
- ಪೊಲೀಸ್ ಇನ್ಸ್‌ಪೆಕ್ಟರ್ (ಸಿವಿಲ್) ಪುಲಿಕೇಶಿನಗರ ರವರ ಮಾಹಿತಿಗಾಗಿ ಸಲ್ಲಿಸಿದೆ.
- ಪೊಲೀಸ್ ಇನ್ಸ್‌ಪೆಕ್ಟರ್ (ಟ್ರಾಫಿಕ್) ಕೆ.ಜಿ.ಹಳ್ಳಿ ರವರ ಮಾಹಿತಿಗಾಗಿ ಸಲ್ಲಿಸಿದೆ.
- ಪೊಲೀಸ್ ಇನ್ಸ್‌ಪೆಕ್ಟರ್(ಟ್ರಾಫಿಕ್) ಪುಲಿಕೇಶಿನಗರ ರವರ ಮಾಹಿತಿಗಾಗಿ ಸಲ್ಲಿಸಿದೆ.
- ವಲಯ ಅರಣ್ಯಾಧಿಕಾರಿಗಳು (ಪೂರ್ವ) ರವರ ಮಾಹಿತಿಗಾಗಿ ಸಲ್ಲಿಸಿದೆ.
- ಕಛೇರಿ ಪ್ರತಿ.